# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸುವರ್ಣ ಗ್ರಾಮೋದಯ ಯೋಜನೆಯ 5ನೇ ಹಂತದಡಿ ರಾಯಚೂರು ಜಿಲ್ಲೆಯ ಮಾನ್ವಿ ಮತ್ತು ರಾಯಚೂರು ತಾಲ್ಲೂಕುಗಳ ಗ್ರಾಮಗಳ ಪಟ್ಟಿಗೆ ಅನುಮೋದನೆ ಕುರಿತು.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:29:ಸುಗ್ರಾಯೋ:2012 ದಿ:29.06.2012

2. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ:29:ಸುಗ್ರಾಯೋ:2012 ದಿ:04.07.2012

3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ರಾಯಚೂರು ಇವರ ಪತ್ರದ ಸಂಖ್ಯೆ:ಜಿಪಂರಾ/ಸು.ಗ್ರಾ.ಯೋ/5ನೇಹಂ/ಗ್ರಾಮ.ಆಯ್ಕೆ/17/2012-13, ದಿನಾಂಕ:15.11.2012

**ಪ್ರಸ್ತಾವನೆ:**

2012-13ನೇ ಸಾಲಿನ ಐದನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯಡಿಯಲ್ಲಿ 1000 ಗ್ರಾಮಗಳನ್ನು ಆಯ್ಕೆ ಮಾಡಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. 5ನೇ ಹಂತದ ಯೋಜನೆಯ ಅನುಷ್ಠಾನ ಮಾಡುವ ಬಗ್ಗೆ, ಗ್ರಾಮಗಳ ಆಯ್ಕೆ, ಅನುದಾನ ಹಂಚಿಕೆ ಇತ್ಯಾದಿ ವಿಷಯಗಳ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ವಿವರವಾಗಿ ಮೇಲಿನ ಓದಲಾಗಿದೆ (1) ಮತ್ತು (2)ರ ಸರ್ಕಾರದ ಆದೇಶ ಹಾಗೂ ಸುತ್ತೋಲೆಯನ್ನು ಹೊರಡಿಸಲಾಗಿದೆ. ಅದರನ್ವಯ **ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನ 24 ಗ್ರಾಮಗಳನ್ನು ಮತ್ತು ರಾಯಚೂರು ತಾಲ್ಲೂಕಿನ 11 ಗ್ರಾಮಗಳನ್ನು** ಆಯ್ಕೆ ಮಾಡಿ ಶಾಸಕರಿಂದ ಶಿಫಾರಸ್ಸು ಮಾಡಿದ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಿಂದ ಅನುಮೋದನೆ ಪಡೆದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ರಾಯಚೂರು ಅವರು ಓದಲಾಗಿದೆ(3)ರಲ್ಲಿ ಸರ್ಕಾರದ ಅನುಮೋದನೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ನಿಯಮಗಳನ್ವಯ ಪರಿಶೀಲಿಸಿದ್ದು, ಆಯ್ಕೆ ಪಟ್ಟಿಯನ್ನು ಅಧಿಕೃತವಾಗಿ ಹೊರಡಿಸಲು ಸರ್ಕಾರಿ ಆದೇಶದ ಅಗತ್ಯವಿದೆ. ಅನುಬಂಧದಲ್ಲಿರುವ **ರಾಯಚೂರು ಜಿಲ್ಲೆಯ 2 ತಾಲ್ಲೂಕುಗಳ 35 ಗ್ರಾಮಗಳನ್ನು** ಸುವರ್ಣ ಗ್ರಾಮೋದಯ ಯೋಜನೆಯ 5ನೇ ಹಂತದಡಿ ಅನುಷ್ಠಾನಗೊಳಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:90:ಸುಗ್ರಾಯೋ:2012.** **ಬೆಂಗಳೂರು, ದಿನಾಂಕ:09.01.2013**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಐದನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯಡಿ **ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನ 24 ಗ್ರಾಮಗಳಿಗೆ ಮತ್ತು ರಾಯಚೂರು ತಾಲ್ಲೂಕಿನ 11 ಗ್ರಾಮಗಳಿಗೆ** ಅನುಬಂಧದಲ್ಲಿ ನಮೂದಿಸಿರುವಂತೆ ಸದರಿ ಗ್ರಾಮಗಳನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ. ಸುವರ್ಣ ಗ್ರಾಮೋದಯ ಯೋಜನೆಯ 5ನೇ ಹಂತವನ್ನು ಅನುಷ್ಠಾನಗೊಳಿಸುವಾಗ ಈ ಕೆಳಕಂಡ ನಿಯಮಗಳನ್ನು ಪಾಲಿಸಲು ಆದೇಶಿಸಿದೆ.

--2--

1. ಓದಲಾಗಿದೆ (1)ರ ಸರ್ಕಾರಿ ಆದೇಶದಲ್ಲಿ ಹಾಗೂ ಓದಲಾಗಿದೆ (2)ರ ಸುತ್ತೋಲೆಯಲ್ಲಿ ಹೊರಡಿಸಲಾದ ಯೋಜನಾ ಮಾರ್ಗಸೂಚಿ ಪ್ರತಿ ಗ್ರಾಮಕ್ಕೆ ಸಂಬಂಧಿಸಿದಂತೆ ಸಮಗ್ರ ಅಭಿವೃದ್ಧಿ ಯೋಜನೆಯನ್ನು ರೂಪಿಸಿ ಅನುಮೋದನೆ ನೀಡಿ ಕಾರ್ಯಗತಗೊಳಿಸುವುದು.
2. ಸರ್ಕಾರಿ ಸುತ್ತೋಲೆಯೊಂದಿಗೆ ಲಗತ್ತಿಸಲಾದ ಅನುಬಂಧ-1ರಲ್ಲಿ ಸೂಚಿಸಿದ ತಾಲ್ಲೂಕುವಾರು ನಿಗದಿಪಡಿಸಿರುವ ಅನುದಾನದ ಮಿತಿಯೊಳಗೆ ಕಾರ್ಯಕ್ರಮವನ್ನು ಕೈಗೊಳ್ಳುವುದು.
3. ಗ್ರಾಮವಾರು ಅನುದಾನವನ್ನು ನಿಗದಿಪಡಿಸುವಾಗ ಗ್ರಾಮದ ಜನಸಂಖ್ಯೆಗನುಗುಣವಾಗಿ ತಲಾನುದಾನ ನಿಯಮಕ್ಕೆ ತಕ್ಕಂತೆ ನಿಗದಿಪಡಿಸಿಕೊಳ್ಳತಕ್ಕದ್ದು.
4. ಸುತ್ತೋಲೆಯೊಂದಿಗೆ ಲಗತ್ತಿಸಲಾದ ಅನುಬಂಧ-2ರ ವೇಳಾಪಟ್ಟಿಗನುಗುಣವಾಗಿ ಕಾರ್ಯಾನುಷ್ಠಾನ ಮಾಡುವುದು.
5. ಆಯ್ಕೆಯಾದ ಗ್ರಾಮವು ಈ ಯೋಜನೆಯ ಹಿಂದಿನ ಹಂತದಲ್ಲಿ ಆಯ್ಕೆಯಾಗಿಲ್ಲದಿರುವ ಬಗ್ಗೆ ಖಾತರಿಪಡಿಸಿಕೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬೂವನಹಳ್ಳಿನಾಗರಾಜ್)
ನಿರ್ದೇಶಕರು(ಸು.ಗ್ರಾ) ಹಾಗೂ
ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಯನ್ನು:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ರಾಯಚೂರು
2. ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು, ರಾಯಚೂರು
3. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಮಾನ್ಯ ಉಪ ಮುಖ್ಯ ಮಂತ್ರಿ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಮುಖ್ಯ ಲೆಕ್ಕಾಧಿಕಾರಿ ಮತ್ತು ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು
6. ಸಂಕಲನಕಾರರು, ರಾಜ್ಯಪತ್ರ, ಬೆಂಗಳೂರು.
7. ಮಹಾಲೇಖಪಾಲರು, ಬೆಂಗಳೂರು.
8. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9. ಸಂಪಾದಕರು, ಕರ್ನಾಟಕ ವಿಕಾಸ, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
10. ಹೆಚ್ಚುವರಿ.

ಅನುಬಂಧ

ರಾಯಚೂರು ಜಿಲ್ಲೆಯ 5ನೇ ಹಂತದ ಸುವರ್ಣ ಗ್ರಾಮೋದಯ ಯೋಜನೆ – ಅನುಮೋದಿತ ಗ್ರಾಮಗಳ ಪಟ್ಟಿ

ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:90:ಸುಗ್ರಾಯೋ:2012, ದಿನಾಂಕ:09.01.2013

ಜಿಲ್ಲೆ: ರಾಯಚೂರು

| ಕ್ರ.ಸಂ. | ತಾಲ್ಲೂಕು | ಕ್ರ.ಸ. | ಗ್ರಾಮಗಳ ಹೆಸರು | 2001ರ ಜನಗಣತಿ ಪ್ರಕಾರ ಜನಸಂಖ್ಯೆ | ನಿಗದಿಪಡಿಸಬೇಕಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|---|---|
| 1 | ರಾಯಚೂರು (ಜನಸಂಖ್ಯೆ–23959) | 1 | ರಾಜಲಬಂಡ | 836 | 30.76 |
| | | 2 | ಏಗನೂರು | 1320 | 48.57 |
| | | 3 | ಕೊರ್ತಕುಂದಾ | 1394 | 51.30 |
| | | 4 | ಸಿಂಗನೋಡಿ | 2311 | 85.04 |
| | | 5 | ಜೇಗರಕಲ್ | 2253 | 82.91 |
| | | 6 | ಗಾಜರಾಳ | 1116 | 41.07 |
| | | 7 | ಮರ್ಚೆಟ್ಹಾಳ | 1966 | 72.35 |
| | | 8 | ಗಾರಲದಿನ್ನಿ | 1830 | 67.34 |
| | | 9 | ಇಬ್ರಾಹಿಂದೊಡ್ಡಿ | 1198 | 44.08 |
| | | 10 | ಸುಲ್ತಾನಪೂರ | 1429 | 52.58 |
| | | 11 | ಹೆಂಬೆರಾಳ | 625 | 23.00 |
| | | | **ಒಟ್ಟು** | **16278** | **599.00** |
| 2 | ಮಾನ್ವಿ (ಜನಸಂಖ್ಯೆ–33604) | 1 | ಹಳ್ಳಿ ಹೊಸೂರು | 2862 | 58.47 |
| | | 2 | ಲಕ್ಕಂದಿನ್ನಿ | 1289 | 26.33 |
| | | 3 | ಶಾಖಾಪೂರು | 417 | 8.52 |
| | | 4 | ಗೃಣದಿನ್ನಿ | 1723 | 35.20 |
| | | 5 | ಎರಲಗಡ್ಡಿ | 776 | 15.85 |
| | | 6 | ದೇವಿಪೂರ | 781 | 15.96 |
| | | 7 | ಖರಾಬದಿನ್ನಿ | 1042 | 21.29 |
| | | 8 | ಉಮಳಿ ಹೊಸೂರು | 1937 | 39.57 |
| | | 9 | ಚಿಕ್ಕ ಕೊಟ್ನೆಕಲ್ | 1869 | 38.18 |
| | | 10 | ಪನ್ನೂರ ಜಾಗೀರ್ | 1282 | 26.19 |
| | | 11 | ಹೋಸೂರು.ಎನ್. | 2255 | 46.07 |
| | | 12 | ಜಕ್ಕಲದಿನ್ನಿ | 1980 | 40.45 |
| | | 13 | ಸಿಂಗಡ್‌ದಿನ್ನಿ | 285 | 5.82 |
| | | 14 | ಅತ್ತನೂರು | 4208 | 85.97 |
| | | 15 | ಹುಂಚೇಡ | 655 | 13.38 |
| | | 16 | ಜಂಗಮರಹಳ್ಳಿ | 1058 | 21.61 |
| | | 17 | ಹಾರಾಪುರ | 1028 | 21.00 |
| | | 18 | ಗುಡಿಹಾಳ | 1122 | 22.92 |
| | | 19 | ಯತಗಲ್ | 1000 | 20.43 |
| | | 20 | ಮಲ್ಕಾಪುರ | 1320 | 26.97 |
| | | 21 | ಸುಂಕನೂರು | 1004 | 20.51 |
| | | 22 | ಕುರ್ಡಿ | 8102 | 165.52 |
| | | 23 | ಸಾದಾಪೂರ | 1484 | 30.32 |
| | | 24 | ಕೊರವಿ | 1637 | 33.44 |
| | | | **ಒಟ್ಟು** | **41116** | **840.00** |
| | | | **ಒಟ್ಟು ಜಿಲ್ಲೆಯ ಮೊತ್ತ** | **57394** | **1439.00** |

(ಬೂವನಹಳ್ಳಿನಾಗರಾಜ್)
ನಿರ್ದೇಶಕರು (ಸುಗ್ರಾ) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ